# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | 81(627) |
| **ಸದಸ್ಯರ ಹೆಸರು** | : | **ಶ್ರೀ ಪಿ.ಹೆಚ್.ಪೂಜಾರ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)** |
| **ಉತ್ತರಿಸುವ ದಿನಾಂಕ** | : | 11.12.2023 |
| **ಉತ್ತರಿಸುವ ಸಚಿವರು** | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕೇಂದ್ರ ಸರ್ಕಾರದ ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆ ಅಡಿ ಅನುದಾನ ಪಡೆದು ರಾಜ್ಯದಲ್ಲಿ ಅಭಿವೃದ್ಧಿ ಪಡಿಸಿರುವ 80 ಸರ್ಕಾರಿ ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳನ್ನು ದಾಖಲು ಮಾಡಲು ಎಲ್ಲಾ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; | ಕೇಂದ್ರ ಪುರಸ್ಕೃತ ಯೋಜನೆಯಾದ ರಾಷ್ಟ್ರೀಯ ಆಯುಷ್ ಅಭಿಯಾನ (NAM) ಯೋಜನೆಯಡಿ ರಾಜ್ಯದಲ್ಲಿ ಅಭಿವೃದ್ಧಿ ಪಡಿಸಿರುವ 80 ಸರ್ಕಾರಿ ತಾಲ್ಲೂಕು ಮತ್ತು ಜಿಲ್ಲಾ ಆಯುಷ್ ಆಸ್ಪತ್ರೆಗಳಿಗೆ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲು ಅವಶ್ಯವಿರುವ ಕಟ್ಟಡ, ಉಪಕರಣ ಮತ್ತು ಪೀಠೋಪಕರಣಗಳ ಜೊತೆಗೆ ಈಗಾಗಲೇ ರಾಜ್ಯ ವಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ, ರಾಷ್ಟ್ರೀಯ ಆಯುಷ್ ಅಭಿಯಾನದಡಿಯಲ್ಲಿ 02 ತಜ್ಞ ವೈದ್ಯರನ್ನು ಒಳಗೊಂಡಂತೆ 08 ಸಿಬ್ಬಂದಿಗಳನ್ನು ತಾತ್ಕಾಲಿಕ ಗುತ್ತಿಗೆ ಆಧಾರದ ಮೇಲೆ ಒದಗಿಸಲಾಗಿದೆ. ಪ್ರತಿ ವರ್ಷ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಪ್ರಕಟಿಸಿರುವ National List of Essential Ayush Medicines (NLEAM) ನಲ್ಲಿರುವ ಆಯುಷ್ ಔಷಧಿಗಳನ್ನು ಜಿಲ್ಲಾ ಆಯುಷ್ ಅಧಿಕಾರಿಗಳ ಬೇಡಿಕೆಯನುಸಾರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ರಡಿ ಪಾರದರ್ಶಕತೆ ಕಾಯ್ದೆಯಿಂದ ವಿನಾಯಿತಿ ಪಡೆದಿರುವ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ಔಷಧಿಗಳನ್ನು ಖರೀದಿಸಿ ನೇರವಾಗಿ ಪೂರೈಸಲಾಗುತ್ತಿದೆ. ಸಾದಿಲ್ವಾರು ವೆಚ್ಚಕ್ಕಾಗಿ ವಾರ್ಷಿಕ ಅನುದಾನವನ್ನು ಒದಗಿಸಲಾಗುತ್ತಿದೆ.<br><br>ಮುಂದುವರೆದು, ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲು ಯಾವುದೇ ತರಹದ ಮೂಲಭೂತ ಸೌಲಭ್ಯಗಳು, ಮಾನವ ಸಂಪನ್ಮೂಲದ ಕೊರತೆ ಇದ್ದಲ್ಲಿ ರಾಜ್ಯ / ಜಿಲ್ಲಾ ವಲಯದಲ್ಲಿಯೂ ಸದರಿ ಆಸ್ಪತ್ರೆಗಳಿಗೆ ಅನುದಾನ ಒದಗಿಸಿಕೊಳ್ಳಲು ಅವಕಾಶವಿರುತ್ತದೆ. |

Scanned with OKEN Scanner

| | | |
|---|---|---|
| (ಆ) | ಹಾಗಿದ್ದಲ್ಲಿ, ಒಳರೋಗಿಗಳನ್ನು ದಾಖಲು ಮಾಡುತ್ತಿಲ್ಲವೆನ್ನುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ; | 80 ಆಸ್ಪತ್ರೆಗಳ ಈಗಾಗಲೇ 55 ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲಾಗಿದ್ದು, ಉಳಿದ 25 ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನುಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. |
| (ಇ) | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? | ರಾಷ್ಟ್ರೀಯ ಆಯುಷ್ ಅಭಿಯಾನದಡಿ ಮೇಲ್ದರ್ಜೆಗೇರಿಸಲಾದ ಆಯುಷ್ ಆಸ್ಪತ್ರೆಗಳಲ್ಲಿ ಲಭ್ಯವಿರುವ ಅನುದಾನವನ್ನು ಬಳಸಿಕೊಂಡು ಅವಶ್ಯಕವಿರುವ ಎಲ್ಲಾ ಸೌಲಭ್ಯಗಳನ್ನು ಸೃಜಿಸಿಕೊಂಡು ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಿ ಆಸ್ಪತ್ರೆಯನ್ನು ಸೂಕ್ತ ರೀತಿಯಲ್ಲಿ ನಿರ್ವಹಿಸಿಕೊಂಡು ಹೋಗುವಂತೆ ನೋಡಿಕೊಳ್ಳುವುದು ಜಿಲ್ಲಾ ಆಯುಷ್ ಅಧಿಕಾರಿಗಳ ಆದ್ಯ ಕರ್ತವ್ಯವಾಗಿರುತ್ತದೆ. ಇದನ್ನೂ ಕೂಡ ಆಯುಷ್ ಆಯುಕ್ತಾಲಯದಿಂದ ಮೇಲ್ವಿಚಾರಣೆ ಮತ್ತು ಉಸ್ತುವಾರಿ ಮಾಡಲಾಗುತ್ತಿದೆ.<br><br>HMIS web Portal ಮಾಸಿಕ ವರದಿ ಹಾಗೂ ಜಿಲ್ಲಾ ಆಯುಷ್ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕೆಲವು ಆಯುಷ್ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಿಲ್ಲದಿರುವುದು ಕಂಡುಬಂದಿರುತ್ತದೆ. ಸದರಿ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಈ ಕೆಳಕಂಡ ಕ್ರಮಗಳನ್ನು ವಹಿಸಲಾಗಿದೆ.<br><br>• ಜಿಲ್ಲಾ ಆಯುಷ್ ಅಧಿಕಾರಿಗಳು ರಾಷ್ಟ್ರೀಯ ಆಯುಷ್ ಅಭಿಯಾನದಡಿ ಮೇಲ್ದರ್ಜೆಗೇರಿಸಲಾದ ಆಯುಷ್ ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಇಲಾಖೆಯಿಂದ ಪತ್ರಸಂಖ್ಯೆ: ಆಯುಷ್/80/ಐಇಸಿ(3)/2017-18, ದಿನಾಂಕ :28-04-2022ರಲ್ಲಿ ಅಧಿಕೃತಜ್ಞಾಪನವನ್ನು ಹಾಗೂ ಪತ್ರಸಂಖ್ಯೆ: ಆಯುಷ್/13/NAM/2022-23 ದಿನಾಂಕ :24-06-2022 ರಲ್ಲಿ ಸುತ್ತೋಲೆಯನ್ನು ಹೊರಡಿಸಲಾಗಿದೆ.<br><br>• ಜಿಲ್ಲಾ ಆಯುಷ್ ಅಧಿಕಾರಿಗಳ ಪ್ರತಿ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರತಿ ಆಸ್ಪತ್ರೆಗಳ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಸೂಚಿಸಲಾಗುತ್ತದೆ.<br><br>• ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸದ ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಪತ್ರಸಂಖ್ಯೆ: ಆಯುಷ್/13/NAM/2022-23, ದಿನಾಂಕ : 30-10-2023 ಮತ್ತು 09-11-2023 ರಲ್ಲಿ ಜಿಲ್ಲಾಧಿಕಾರಿಗಳಿಗೆ ಮತ್ತುಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ರವರಿಗೆ ಅರೆ ಸರ್ಕಾರಿ ಪತ್ರವನ್ನು ಸಹ ಬರೆಯಲಾಗಿದೆ. |

Scanned with OKEN Scanner

| | | |
|---|---|---|
| | | ಫಲಿತಾಂಶ:<br><br>ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಕ್ರಮ ಕೈಗೊಳ್ಳುವ ಮುನ್ನ ಮಂಡ್ಯ, ಹಾಸನ, ಗದಗ, ಬಳ್ಳಾರಿ, ವಿಜಯಪುರ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ತಲಾ ಒಂದೊಂದು ಆಸ್ಪತ್ರೆಯಲ್ಲಿ ಮಾತ್ರ ಒಳರೋಗಿಗಳನ್ನು ದಾಖಲಾತಿ ಮಾಡಿಕೊಳ್ಳಲಾಗುತ್ತಿತ್ತು. ಆದಾಗ್ಯೂ ಒಳರೋಗಿಗಳ ದಾಖಲಾತಿಗಳನ್ನು ಮಾಡಿಕೊಳ್ಳಲು ಈ ಕೆಳಕಂಡ ಕ್ರಮಗಳು ಸಹಾಯಕವಾಗಿವೆ.<br><br>i. ಆಯುಷ್/80/ಐಇಸಿ(3)/2017-18, ದಿನಾಂಕ: 28-04-2022 ರಲ್ಲಿ ಅಧಿಕೃತ ಜ್ಞಾಪನವನ್ನು ಹಾಗೂ ಪತ್ರ ಸಂಖ್ಯೆ: ಆಯುಷ್/13/NAM/2022-23, ದಿನಾಂಕ:24-06-2022 ರಲ್ಲಿ ಸುತ್ತೋಲೆಯನ್ನು ಹೊರಡಿಸಿದ ನಂತರ 35 ಆಸ್ಪತೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲಾಗಿದೆ.<br><br>ii. ಜಿಲ್ಲಾ ಆಯುಷ್ ಅಧಿಕಾರಿಗಳ ಪ್ರತಿ ಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪ್ರತಿ ಆಸ್ಪತ್ರೆಗಳ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸುವಂತೆ ಸೂಚಿಸಿದ ನಂತರ 20 ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಪ್ರಾರಂಭಿಸಲಾಗಿದೆ.<br><br>ಹಾಗೂ ಪತ್ರ ಸಂಖ್ಯೆ: ಆಯುಷ್/13/NAM/2022-23 ದಿನಾಂಕ:30-10-2023 ಮತ್ತು 09-11-2023 ರಲ್ಲಿ ಜಿಲ್ಲಾಧಿಕಾರಿಗಳಿಗೆ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರವರಿಗೆ ಅರೆ ಸರ್ಕಾರಿ ಪತ್ರವನ್ನು ಬರೆದ ನಂತರ ಉಳಿದ 25 ಆಸ್ಪತ್ರೆಗಳಲ್ಲಿ ಒಳರೋಗಿಗಳ ದಾಖಲಾತಿಯನ್ನು ಈಗಷ್ಟೆ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. |

**ಸಂಖ್ಯೆ:** ಆಕುಕ 236 ಪಿಐಎಂ 2023

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಪ್ರ
1)
ನಿ
2) ರ

Scanned with OKEN Scanner